# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2023-24ನೇ ಶೈಕ್ಷಣಿಕ ಸಾಲಿನಲ್ಲಿ ಇಂಜಿನಿಯರಿಂಗ್/ಆರ್ಕಿಟೆಕ್ಚರ್ ಕೋರ್ಸುಗಳಿಗೆ ಸಂಬಂಧಿಸಿದಂತೆ, ಖಾಸಗಿ/ಡೀಮ್ಡ್ ವಿಶ್ವವಿದ್ಯಾಲಯಗಳ ಸರ್ಕಾರಿ ಕೋಟಾದ ಸೀಟುಗಳಿಗೆ ಶುಲ್ಕ ನಿಗದಿಪಡಿಸುವ ಕುರಿತು.

## ಓದಲಾಗಿದೆ:-

1. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 215 ಟಿಇಸಿ 2023, ದಿನಾಂಕ:04.08.2023.
2. ಸರ್ಕಾರದ ಆದೇಶ ಸಂಖ್ಯೆ:ಇಡಿ 195 ಟಿಇಸಿ 2022, ದಿನಾಂಕ:07.10.2022.
3. ಸರ್ಕಾರದ ಆದೇಶ ಸಂಖ್ಯೆ:ಇಡಿ 217 ಟಿಇಸಿ 2023, ದಿನಾಂಕ:02.08.2023

## ಪ್ರಸ್ತಾವನೆ:-

ಖಾಸಗಿ/ ಡೀಮ್ಡ್ ವಿಶ್ವವಿದ್ಯಾಲಯಗಳಲ್ಲಿ ನಡೆಸುವ ತಾಂತ್ರಿಕ ಕೋರ್ಸುಗಳಿಗೆ ಸಂಬಂಧಿಸಿದಂತೆ, ಖಾಸಗಿ ವಿಶ್ವವಿದ್ಯಾಲಯಗಳ ಅಧಿನಿಯಮದನ್ವಯ ಪ್ರತಿ ಕೋರ್ಸಿನ ವಿದ್ಯಾರ್ಥಿಗಳ ಪ್ರವೇಶಾತಿಯಲ್ಲಿ ಶೇ.40ರಷ್ಟು ಸೀಟುಗಳು ಸರ್ಕಾರಿ ಸೀಟುಗಳಾಗಿರುತ್ತವೆ. ಆದರೆ ಗೀತಾಂ ವಿಶ್ವವಿದ್ಯಾಲಯವು ಆಫ್ ಕ್ಯಾಂಪಸ್ ವಿಶ್ವವಿದ್ಯಾಲಯವಾಗಿದ್ದು, ಪ್ರತಿ ಕೋರ್ಸಿನ ವಿದ್ಯಾರ್ಥಿ ಪ್ರವೇಶಾತಿಯನ್ನು ಶೇಕಡ 25ರಷ್ಟು ಪ್ರಮಾಣದ ಸೀಟುಗಳನ್ನು ಕರ್ನಾಟಕ ವಿದ್ಯಾರ್ಥಿಗಳಿಂದ ಭರ್ತಿಮಾಡಲಾಗುತ್ತಿದೆ. ಈ ಶೇಕಡವಾರು ಪ್ರಮಾಣದ ಸೀಟುಗಳನ್ನು ಸರ್ಕಾರದ ವತಿಯಿಂದ ಭರ್ತಿ ಮಾಡಲು ಹಾಗೂ ಬೋಧನಾ ಶುಲ್ಕವನ್ನು ನಿಗದಿಪಡಿಸುವ ನಿಟ್ಟಿನಲ್ಲಿ ಕ್ರಮವಹಿಸಬೇಕಾಗಿರುತ್ತದೆ. ಅದರಂತೆ, ಮೇಲೆ ಓದಲಾದ ಉಲ್ಲೇಖಿತ 1ರ ಅಧಿಸೂಚನೆಯಲ್ಲಿ 2023-24ನೇ ಶೈಕ್ಷಣಿಕ ಸಾಲಿನ ಸೀಟುಗಳನ್ನು ಸರ್ಕಾರದ ವತಿಯಿಂದ ಸೀಟ್ ಮ್ಯಾಟ್ರಿಕ್ಸ್ ಮೂಲಕ ಹಂಚಿಕೆ ಮಾಡಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸಲಾಗಿದೆ.

ಈ ಹಿಂದೆ, ಖಾಸಗಿ ವೃತ್ತಿಪರ ಶಿಕ್ಷಣ ಸಂಸ್ಥೆಗಳ ಸರ್ಕಾರಿ ಕೋಟಾದ ಸೀಟುಗಳಿಗೆ ನಿಗದಿಪಡಿಸಿದ ಬೋಧನಾ ಶುಲ್ಕದ ದರವನ್ನು ಆಧರಿಸಿ, ಖಾಸಗಿ ವಿಶ್ವವಿದ್ಯಾಲಯಗಳ ಬೋಧನಾ ಶುಲ್ಕವನ್ನು ನಿಗದಿಪಡಿಸಿರುವುದು ಕಂಡುಬರುತ್ತದೆ. ಅದರಂತೆ, ಸದರಿ ಮಾನದಂಡವನ್ನು ಆಧರಿಸಿ, 2022-23ನೇ ಶೈಕ್ಷಣಿಕ ಸಾಲಿಗೆ ವೃತ್ತಿಪರ ಶಿಕ್ಷಣ ಸಂಸ್ಥೆಗಳ ಸರ್ಕಾರಿ ಕೋಟಾದ ಸೀಟುಗಳಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶದಲ್ಲಿ ನಿಗದಿಪಡಿಸಿರುವ ಬೋಧನಾ ಶುಲ್ಕ ಮತ್ತು ಇತರೆ ಶುಲ್ಕಗಳ ದರಗಳ ಸರಾಸರಿ ಮೊತ್ತವನ್ನು 2022-23ನೇ ಶೈಕ್ಷಣಿಕ ಸಾಲಿಗೆ ಖಾಸಗಿ/ಡೀಮ್ಡ್ ವಿಶ್ವವಿದ್ಯಾಲಯಗಳ ಸರ್ಕಾರಿ ಕೋಟಾದ ಸೀಟುಗಳಿಗೆ ಬೋಧನಾ ಶುಲ್ಕವನ್ನಾಗಿ ನಿಗದಿಪಡಿಸಲಾಗಿತ್ತು.

2023-24ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಕೋಟಾದಡಿ ಪ್ರವೇಶಾತಿ ಪಡೆಯುವ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ, ದಿನಾಂಕ:31.07.2023ರಂದು ಮಾನ್ಯ ಉನ್ನತ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ಖಾಸಗಿ ವೃತ್ತಿಪರ ಶಿಕ್ಷಣ ಸಂಸ್ಥೆಗಳ ಒಕ್ಕೂಟ/ಪ್ರತಿನಿಧಿಗಳಾದ

KUPECA ಮತ್ತು KRLMPCA ಪದಾಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಬೋಧನಾ ಶುಲ್ಕ ನಿಗದಿಯ ಬಗ್ಗೆ ಚರ್ಚಿಸಲಾಗಿದ್ದು, 2023-24ನೇ ಶೈಕ್ಷಣಿಕ ಸಾಲಿಗೆ ಕರ್ನಾಟಕ ವೃತ್ತಿಪರ ಕೋರ್ಸುಗಳ ಬೋಧನಾ ಶುಲ್ಕದಲ್ಲಿ ಈ ಹಿಂದೆ ಹೆಚ್ಚಳ ಮಾಡಿರುವ ಶೇ.10ರಷ್ಟು ಬೋಧನಾ ಶುಲ್ಕವನ್ನು ಶೇ.7ರಷ್ಟಕ್ಕೆ ಸೀಮಿತಗೊಳಿಸಿ, ಪರಿಷ್ಕೃತ ಸಮ್ಮತಾಭಿಪ್ರಾಯ ಮಾಡಿಕೊಳ್ಳಲು ತೀರ್ಮಾನಿಸಲಾಗಿದ್ದು, ಅದರಂತೆ ದಿನಾಂಕ:31.07.2023ರಂದು ಸಮ್ಮತಾಭಿಪ್ರಾಯದ ಒಡಂಬಡಿಕೆಯನ್ನು ಮಾಡಿಕೊಳ್ಳಲಾಗಿದೆ.

ಅದರಂತೆ, ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಆದೇಶದಲ್ಲಿ 2023-2024ನೇ ಶೈಕ್ಷಣಿಕ ಸಾಲಿನ ವೃತ್ತಿಪರ ಇಂಜಿನಿಯರಿಂಗ್/ಆರ್ಕಿಟೆಕ್ಚರ್ ಕೋರ್ಸುಗಳಿಗೆ ಪ್ರವೇಶಾತಿ ಶುಲ್ಕ ಮತ್ತು ಸೀಟು ಹಂಚಿಕೆ ಪ್ರಮಾಣವನ್ನು ನಿಗದಿಪಡಿಸಿ ಆದೇಶಿಸಲಾಗಿರುತ್ತದೆ. ಸದರಿ ಆದೇಶದಲ್ಲಿ ನಿಗದಿಪಡಿಸಿದ ಶುಲ್ಕದ ದರಗಳ ಸರಾಸರಿ ಮೊತ್ತವನ್ನು ಬೋಧನಾ ಶುಲ್ಕವನ್ನಾಗಿ ನಿಗದಿಪಡಿಸಲು ಮತ್ತು ಖಾಸಗಿ ವೃತ್ತಿಪರ ಶಿಕ್ಷಣ ಸಂಸ್ಥೆಗಳಿಗೆ ಇತರೆ ಶುಲ್ಕ ಹಾಗೂ ಸ್ಕಿಲ್ ಲ್ಯಾಬ್ ಶುಲ್ಕಗಳನ್ನು ನಿಗದಿಪಡಿಸಲು ಅನುಸರಿಸಿರುವ ಮಾನದಂಡದಂತೆಯೇ ಖಾಸಗಿ/ ಡೀಮ್ಡ್ ವಿಶ್ವವಿದ್ಯಾಲಯಗಳಿಗೂ ಸಹ ಅನುಸರಿಸಿ ನಿಗದಿಪಡಿಸಲು ಸರ್ಕಾರವು ನಿರ್ಣಯಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಇಡಿ 369 ಟಿಇಸಿ 2023</u>**

**<u>ಬೆಂಗಳೂರು, ದಿನಾಂಕ:19ನೇ ಆಗಸ್ಟ್ 2023.</u>**

ಪ್ರಸ್ತಾವನೆಯಲ್ಲಿ ವಿವರಿಸುವ ಕಾರಣಗಳ ಹಿನ್ನಲೆಯಲ್ಲಿ, 2023-24ನೇ ಶೈಕ್ಷಣಿಕ ಸಾಲಿಗೆ ಖಾಸಗಿ/ಡೀಮ್ಡ್ ವಿಶ್ವವಿದ್ಯಾಲಯಗಳು ವಿಶ್ವವಿದ್ಯಾಲಯದ ಅಧಿನಿಯಮದಲ್ಲಿ ಉಲ್ಲೇಖಿಸಿರುವ ಸರ್ಕಾರಿ ಕೋಟಾದ ಶೇಕಡವಾರು ಪ್ರಮಾಣದ ಸೀಟುಗಳಿಗೆ ಈ ಕೆಳಕಂಡ ನಿಬಂಧನೆಗೊಳಪಟ್ಟು ಬೋಧನಾ ಶುಲ್ಕವಾಗಿ ರೂ.69,214 /- ಗಳನ್ನು ನಿಗದಿಪಡಿಸಿ, ಆದೇಶಿಸಿದೆ.

1. ಎಲ್ಲಾ ಖಾಸಗಿ/ಡೀಮ್ಡ್ ವಿಶ್ವವಿದ್ಯಾಲಯಗಳು ಮೇಲೆ ನಿಗದಿಪಡಿಸಿದ ಬೋಧನಾ ಶುಲ್ಕವನ್ನು ಮಾತ್ರ ಪಡೆಯತಕ್ಕದ್ದು.

2. ವೃತ್ತಿಪರ ಕೋರ್ಸುಗಳಿಗೆ ಪ್ರವೇಶಾತಿ ಪಡೆಯುವ ಸಂದರ್ಭದಲ್ಲಿಯೇ ಬೋಧನಾ ಶುಲ್ಕ ವಿಶ್ವವಿದ್ಯಾಲಯ ಶುಲ್ಕ, ಇತರೆ ಶುಲ್ಕ ಹಾಗೂ ಸ್ಕಿಲ್ ಲ್ಯಾಬ್ ಶುಲ್ಕಗಳನ್ನು ಪ್ರತಿ ವಿದ್ಯಾರ್ಥಿಯಿಂದ ಕರ್ನಾಟಕ ಪರೀಕ್ಷಾ ಪ್ರಾಧಿಕಾರವೇ ಪಡೆಯತಕ್ಕದ್ದು. ಈ ಸಂಬಂಧ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ವೆಬ್‌ಸೈಟ್‌ನಲ್ಲಿ ಮುಂಚಿತವಾಗಿಯೇ ಪ್ರಕಟಿಸುವುದು. ಕೌನ್ಸಿಲಿಂಗ್ ಪೂರ್ಣಗೊಂಡ ನಂತರ 2 ತಿಂಗಳೊಳಗಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಬೋಧನಾ ಶುಲ್ಕ, ವಿಶ್ವವಿದ್ಯಾಲಯ ಶುಲ್ಕ, ಇತರೆ ಶುಲ್ಕ ಹಾಗೂ ಸ್ಕಿಲ್ ಲ್ಯಾಬ್ ಶುಲ್ಕಗಳನ್ನು ಆಯಾಯ ಖಾಸಗಿ/ಡೀಮ್ಡ್ ವಿಶ್ವವಿದ್ಯಾಲಯಗಳಿಗೆ ವರ್ಗಾಯಿಸಲು ಕ್ರಮ ತೆಗೆದುಕೊಳ್ಳತಕ್ಕದ್ದು.

3. ಕರ್ನಾಟಕ ಪರೀಕ್ಷಾ ಪ್ರಾಧಿಕಾರದವರು ನಡೆಸುವ ವೃತ್ತಿಪರ ಕೋರ್ಸುಗಳಿಗೆ ಕೌನ್ಸಿಲಿಂಗ್ ಮುಖಾಂತರ ಆಯ್ಕೆಯಾಗುವ ವಿದ್ಯಾರ್ಥಿಗಳು ಮೇಲಿನಂತೆ ಶುಲ್ಕಗಳನ್ನು ಪಾವತಿಸಿದ ತರುವಾಯ, ಸದರಿ ವಿದ್ಯಾರ್ಥಿಗಳಿಂದ ಖಾಸಗಿ ವಿಶ್ವವಿದ್ಯಾಲಯಗಳು ಯಾವುದೇ ಹೆಚ್ಚುವರಿ ಶುಲ್ಕವನ್ನು ಪಡೆಯುವಂತಿಲ್ಲ.
4. ಪ್ರವೇಶಾತಿ ಪಡೆದ ವಿದ್ಯಾರ್ಥಿಗಳು ಕಾರಣಾಂತರಗಳಿಂದ ಒಂದು ವೇಳೆ ವಿದ್ಯಾಭ್ಯಾಸವನ್ನು ಮೊಟಕುಗೊಳಿಸಿದ್ದಲ್ಲಿ, ಸದರಿ ವಿದ್ಯಾರ್ಥಿಗಳು ಪ್ರವೇಶಾತಿ ಸಂದರ್ಭದಲ್ಲಿ ಸಂಸ್ಥೆಗೆ ಸಲ್ಲಿಸಲ್ಪಟ್ಟ ಮೂಲ ದಾಖಲಾತಿಗಳನ್ನು ಮತ್ತು ಬೋಧನಾ ಶುಲ್ಕವನ್ನು ತಕ್ಷಣವೇ ಹಿಂದಿರುಗಿಸುವ ಬಗ್ಗೆ ಖಾಸಗಿ/ಡೀಮ್ಡ್ ವಿಶ್ವವಿದ್ಯಾಲಯಗಳು ಕ್ರಮವಹಿಸುವುದು.
5. ಎಐಸಿಟಿಇ ಹಾಗೂ ಯುಜಿಸಿಯು ನಿಗಧಿಪಡಿಸಿರುವ ಮಾರ್ಗಸೂಚಿಗಳನ್ನು, Mandatory Disclosure ನ್ನು ತಮ್ಮ ವಿಶ್ವವಿದ್ಯಾಲಯದ ಅಧಿಕೃತ ವೆಬ್‌ಸೈಟ್ ನಲ್ಲಿ ಪ್ರಕಟಿಸುವುದು ಹಾಗೂ ಎಐಸಿಟಿಇಯು ಕಾಲಕಾಲಕ್ಕೆ ಹೊರಡಿಸಿರುವ ಮಾರ್ಗಸೂಚಿ/ನಿಯಮಗಳನ್ನು ತಪ್ಪದೇ ಪಾಲಿಸುವುದು.
6. 2023-24ನೇ ಶೈಕ್ಷಣಿಕ ಸಾಲಿಗೆ ಎಲ್ಲಾ ಖಾಸಗಿ/ಡೀಮ್ಡ್ ವಿಶ್ವವಿದ್ಯಾಲಯಗಳು ವೃತ್ತಿಪರ ಇಂಜಿನಿಯರಿಂಗ್/ಆರ್ಕಿಟೆಕ್ಚರ್ ಕೋರ್ಸುಗಳಿಗೆ ಪ್ರವೇಶಾತಿ ಪ್ರಕ್ರಿಯೆ ಮತ್ತು ಶುಲ್ಕ ನಿಗದಿಯನ್ನು ಈ ಆದೇಶದನ್ವಯವೇ ಅನುಷ್ಠಾನಗೊಳಿಸತಕ್ಕದ್ದು.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ**

19/8/2023

**(ಮಹಾಂತಪ್ಪ ಎಸ್.ತುರಕನೂರ)**
**ಸರ್ಕಾರದ ಅಧೀನ ಕಾರ್ಯದರ್ಶಿ,**
**ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ)**

ಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ರವರು ಇದನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ ಸರ್ಕಾರಕ್ಕೆ 100 ಪ್ರತಿಗಳನ್ನು ಕಳುಹಿಸಲು ಕೋರಿದೆ.

ಪ್ರತಿ:
1. ಕುಲಪತಿಗಳು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಜ್ಞಾನಸಂಗಮ, ಬೆಳಗಾವಿ.
2. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 16ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.
4. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
5. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
6. ಎಲ್ಲಾ ಖಾಸಗಿ/ಡೀಮ್ಡ್ ವಿಶ್ವವಿದ್ಯಾಲಯಗಳ ಕುಲಸಚಿವರುಗಳಿಗೆ.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ
8. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಉನ್ನತ ಶಿಕ್ಷಣ ಇಲಾಖೆ
9. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯ)
10. ಮಾಹಿತಿ ಕೇಂದ್ರ, ಶಿಕ್ಷಣ ಇಲಾಖೆ (ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಿದೆ)
11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.